ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಬೀದರ್ ಜಿಲ್ಲೆಯಲ್ಲಿ ಆಹಾರ ಧಾನ್ಯಗಳ ವಿತರಣೆ ಕುರಿತು

ಶ್ರೀ ವಿಜಯ್ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

547 (737) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ;

(ಆ) ಬೀದರ್ ಜಿಲ್ಲೆಯಲ್ಲಿ ಸರಿಯಾದ ಸಮಯಕ್ಕೆ ಆಹಾರ ಧಾನ್ಯಗಳನ್ನು ವಿತರಣೆ ಮಾಡದೆ, ಜನ ಸಾಮಾನ್ಯರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬೀದರ್ ಜಿಲ್ಲೆಯಲ್ಲಿ ನ್ಯಾಯಬೆಲೆ ಅಂಗಡಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾರ್ಯ ನಿರ್ವಹಿಸದೇ ಇರುವ ನ್ಯಾಯಬೆಲೆ ಅಂಗಡಿಗಳ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ತಾಲ್ಲೂಕುವಾರು ವಿವರ ಒದಗಿಸುವುದು)